## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 455 |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 30.01.2026. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಎಷ್ಟು ಗ್ರಾಮ ಪಂಚಾಯಿತಿಗಳಿಗೆ ಸ್ವಂತ ನಿವೇಶನ ಹಾಗೂ ಸ್ವಂತ ಕಟ್ಟಡಗಳಿವೆ; ಸ್ವಂತ ಕಟ್ಟಡಗಳಿಲ್ಲದ ಗ್ರಾಮ ಪಂಚಾಯಿತಿಗಳಿಗೆ ಕಟ್ಟಡ ನಿರ್ಮಾಣಕ್ಕಾಗಿ ಅನುದಾನವನ್ನು ಯಾವ ಮಾನದಂಡದಡಿ ಮಂಜೂರು ಮಾಡಲಾಗುತ್ತಿದೆ; (ಸಂಪೂರ್ಣ ವಿವರ ಒದಗಿಸುವುದು) | ರಾಜ್ಯದ 5949 ಗ್ರಾಮ ಪಂಚಾಯತಿಗಳ ಪೈಕಿ 5761 ಗ್ರಾಮ ಪಂಚಾಯತಿಗಳು ಸ್ವಂತ ಕಟ್ಟಡ ಹೊಂದಿದ್ದು, 188 ಗ್ರಾಮ ಪಂಚಾಯತಿಗಳು ಬಾಡಿಗೆ/ ಇತರೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ.<br><br>ಬಾಡಿಗೆ / ಇತರೆ ಕಟ್ಟಡದಲ್ಲಿನ 188 ಗ್ರಾಮ ಪಂಚಾಯತಿಗಳ ಪೈಕಿ 108 ಗ್ರಾಮ ಪಂಚಾಯತಿಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ನಿವೇಶನ ಲಭ್ಯವಿರುವ ವಿವರವನ್ನು ಅನುಬಂಧದಲ್ಲಿ ನೀಡಿದೆ.<br><br>ಗ್ರಾಮ ಪಂಚಾಯತಿ ಸ್ವಂತ ಕಟ್ಟಡ ನಿರ್ಮಾಣಕ್ಕೆ ಸರ್ಕಾರದಿಂದ ರೂ.20.00 ಲಕ್ಷಗಳ ಅನುದಾನವನ್ನು ಒದಗಿಸಲಾಗುತ್ತಿದ್ದು, ಇದರೊಂದಿಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಗ್ರಾಮ ಪಂಚಾಯತಿ ಸ್ವಂತ ಸಂಪನ್ಮೂಲ ಬಳಸಿಕೊಂಡು ಕಟ್ಟಡ ನಿರ್ಮಾಣ ಮಾಡಲು ತಿಳಿಸಲಾಗಿದೆ. |
| (ಆ) | ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ನಿವೇಶನ ಹಾಗೂ ಸ್ವಂತ ಕಟ್ಟಡಗಳಿವೆ; ಈ ಜಿಲ್ಲೆಗಳಲ್ಲಿ ಸ್ವಂತ ಕಟ್ಟಡಗಳಿಲ್ಲದ ಎಷ್ಟು ಗ್ರಾಮ ಪಂಚಾಯಿತಿಗಳಿಗೆ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ಮಂಜೂರು ಮಾಡಲಾಗಿದೆ; ಉಳಿದವುಗಳಿಗೆ ಯಾವ ಕಾಲಮಿತಿಯೊಳಗೆ ಸ್ವಂತ ನಿವೇಶನ ಪಡೆಯಲು ಮತ್ತು ಕಟ್ಟಡ ನಿರ್ಮಿಸಲು ಅನುದಾನವನ್ನು ಮಂಜೂರು ಮಾಡಲು ಕ್ರಮ ವಹಿಸಲಾಗುವುದು; | ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಲ್ಲಾ ಗ್ರಾಮ ಪಂಚಾಯತಿಗಳು ಕಟ್ಟಡವನ್ನು ಹೊಂದಿರುತ್ತವೆ. ಇದರಲ್ಲಿ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಿಥಿಲಗೊಂಡಿರುವ ತಲಾ 4 ಗ್ರಾಮ ಪಂಚಾಯತಿಗಳಿಗೆ ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯಡಿ ಕಟ್ಟಡ ನಿರ್ಮಾಣಕ್ಕಾಗಿ ರೂ. 8.00 ಲಕ್ಷ ಅನುದಾನವನ್ನು ಬಿಡುಗಡೆಗೊಳಿಸಲಾಗಿದ್ದು, ಹಣ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸಿದ ನಂತರ ಬಾಕಿ ಅನುದಾನವನ್ನು ಬಿಡುಗಡೆಗೊಳಿಸಲಾಗುವುದು. |

| | | |
|---|---|---|
| (ಇ) | ಗ್ರಾಮ ಪಂಚಾಯಿತಿಗಳಲ್ಲಿ ಸಮರ್ಪಕ ಮೂಲಭೂತ ಸೌಲಭ್ಯ ನೀಡಲು ಹಾಗೂ ಅಡಳಿತ ವೆಚ್ಚವನ್ನು ಕಡಿಮೆ ಮಾಡಲು 15ಕ್ಕಿಂತ ಕಡಿಮೆ ಸದಸ್ಯರಿರುವ ಗ್ರಾಮ ಪಂಚಾಯಿತಿಗಳನ್ನು ಒಗ್ಗೂಡಿಸಿ ಗ್ರಾಮ ಪಂಚಾಯಿತಿಗಳಾಗಿ ಮರುವರ್ಗೀಕರಿಸಲು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು; | ಇಂತಹ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| (ಈ) | ಸ್ವಂತ ನಿವೇಶನ ಪಡೆಯಲು ಹಾಗೂ ಇತರ ಸಾರ್ವಜನಿಕ ಆಸ್ತಿ ಸೃಜನೆಗಾಗಿ ಗ್ರಾಮ ಪಂಚಾಯಿತಿಗಳಿಂದ ಕಂದಾಯ ಇಲಾಖೆಗೆ ಸಲ್ಲಿಸಲಾದ ಒಟ್ಟು ಪ್ರಸ್ತಾವನೆಗಳ ಸಂಖ್ಯೆ ಎಷ್ಟು; ಈ ಪೈಕಿ ಜಿಲ್ಲಾಧಿಕಾರಿಗಳಿಂದ ಮಂಜೂರಾಗಿ ಪಹಣಿಯಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; ಬಾಕಿ ಪ್ರಕರಣಗಳಲ್ಲಿ ಯಾವ ಕಾಲಮಿತಿಯೊಳಗೆ ಪಹಣಿಯಲ್ಲಿ ಗ್ರಾಮ ಪಂಚಾಯಿತಿಯ ಹೆಸರನ್ನು ದಾಖಲಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ? | 108 ಗ್ರಾಮ ಪಂಚಾಯತಿಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ನಿವೇಶನ ಲಭ್ಯವಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: ಗ್ರಾಅಪ 103 ಗ್ರಾಪಂಅ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

ಅನುಬಂಧ

ಸ್ವಂತ/ಬಾಡಿಗೆ/ಇತರೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ನಿವೇಶನ ಲಭ್ಯವಿರುವ ಗ್ರಾಮ ಪಂಚಾಯಿತಿಗಳ ವಿವರ

| ಕ್ರ. ಸಂ | ಜಿಲ್ಲೆ | ತಾಲ್ಲೂಕು | ಒಟ್ಟು ಗ್ರಾಮ ಪಂಚಾಯತಿಗಳ ಸಂಖ್ಯೆ | ಸ್ವಂತ ಕಟ್ಟಡ ಹೊಂದಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ | ಬಾಡಿಗೆ/ಇತರೆ ಕಟ್ಟಡದಲ್ಲಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ | ಸ್ವಂತ ಕಟ್ಟಡ ನಿರ್ಮಾಣ ಮಾಡಲು ನಿವೇಶನ ಲಭ್ಯವಿರುವ ಗ್ರಾ.ಪಂ.ಗಳ ಸಂಖ್ಯೆ |
|---|---|---|---|---|---|---|
| 1 | ಬಾಗಲಕೋಟೆ | 9 | 196 | 192 | 4 | 4 |
| 2 | ಬಳ್ಳಾರಿ | 5 | 100 | 99 | 1 | 0 |
| 3 | ಬೆಳಗಾವಿ | 14 | 500 | 494 | 6 | 5 |
| 4 | ಬೆಂಗಳೂರು ನಗರ | 5 | 85 | 78 | 7 | 4 |
| 5 | ಬೆಂಗಳೂರು ಗ್ರಾಮಾಂತರ | 4 | 101 | 100 | 1 | 1 |
| 6 | ಬೆಂಗಳೂರು ದಕ್ಷಿಣ | 5 | 126 | 124 | 2 | 2 |
| 7 | ಬೀದರ್ | 8 | 183 | 182 | 1 | 0 |
| 8 | ಚಾಮರಾಜನಗರ | 5 | 130 | 119 | 11 | 10 |
| 9 | ಚಿಕ್ಕಬಳ್ಳಾಪುರ | 7 | 157 | 150 | 7 | 5 |
| 10 | ಚಿಕ್ಕಮಗಳೂರು | 9 | 226 | 215 | 11 | 0 |
| 11 | ಚಿತ್ರದುರ್ಗ | 6 | 189 | 181 | 8 | 8 |
| 12 | ದಕ್ಷಿಣ ಕನ್ನಡ | 9 | 223 | 223 | 0 | 0 |
| 13 | ದಾವಣಗೆರೆ | 6 | 194 | 188 | 6 | 3 |
| 14 | ಧಾರವಾಡ | 8 | 146 | 135 | 11 | 11 |
| 15 | ಗದಗ | 7 | 122 | 113 | 9 | 9 |
| 16 | ಹಾಸನ | 8 | 264 | 263 | 1 | 0 |
| 17 | ಹಾವೇರಿ | 8 | 223 | 218 | 5 | 5 |
| 18 | ಕಲಬುರಗಿ | 11 | 261 | 245 | 16 | 0 |
| 19 | ಕೊಡಗು | 5 | 102 | 100 | 2 | 0 |
| 20 | ಕೋಲಾರ | 6 | 154 | 146 | 8 | 7 |
| 21 | ಕೊಪ್ಪಳ | 7 | 153 | 134 | 19 | 19 |
| 22 | ಮಂಡ್ಯ | 7 | 233 | 230 | 3 | 0 |
| 23 | ಮೈಸೂರು | 9 | 256 | 237 | 19 | 0 |
| 24 | ರಾಯಚೂರು | 8 | 179 | 179 | 0 | 0 |
| 25 | ಶಿವಮೊಗ್ಗ | 7 | 262 | 262 | 0 | 0 |
| 26 | ತುಮಕೂರು | 11 | 330 | 328 | 2 | 0 |
| 27 | ಉಡುಪಿ | 7 | 155 | 154 | 1 | 0 |
| 28 | ಉತ್ತರ ಕನ್ನಡ | 12 | 229 | 224 | 5 | 2 |
| 29 | ವಿಜಯನಗರ | 6 | 137 | 136 | 1 | 1 |
| 30 | ವಿಜಯಪುರ | 13 | 211 | 197 | 14 | 12 |
| 31 | ಯಾದಗಿರಿ | 6 | 122 | 115 | 7 | 0 |
| ಒಟ್ಟು | | **238** | **5949** | **5761** | **188** | **108** |